# ಕರ್ನಾಟಕ ವಿಧಾನ ಪರಿಷತ್ತು

| | |
|---|---|
| ಸದಸ್ಯರ ಹೆಸರು | ಶ್ರೀ ಸಿ.ಎನ್. ಮಂಜೇಗೌಡ (ಸ್ಥಳೀಯ ಸಂಸ್ಥೆಗಳಿಂದ ಚುನಾಯಿತರಾದವರು) |
| ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ | 1066(1199) |
| ಉತ್ತರಿಸಬೇಕಾದ ದಿನಾಂಕ | 19.12.2024 |
| ಉತ್ತರಿಸಬೇಕಾದವರು | ನಗರಾಭಿವೃದ್ಧಿ ಮತ್ತು ನಗರ ಯೋಜನೆ ಸಚಿವರು |

| ಕ್ರ. ಸಂ. | ಪ್ರಶ್ನೆ | ಉತ್ತರ |
|---|---|---|
| ಅ) | ಮೈಸೂರು ಜಿಲ್ಲೆಯ ಹುಣಸೂರು ಪಟ್ಟಣದೊಳಗೆ ಹರಿಯುವ ಲಕ್ಷ್ಮಣತೀರ್ಥ ನದಿ ತ್ಯಾಜ್ಯ ತುಂಬಿ, ಚರಂಡಿ ನೀರಿನಂತಾಗಿ ದುರ್ವಾಸನೆ ಬೀರುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; | ಹೌದು, ಬಂದಿರುತ್ತದೆ. |
| ಆ) | ತ್ಯಾಜ್ಯ ನೀರು ನದಿ ಒಡಲಿಗೆ ಸೇರಿದಂತೆ ಈ ಹಿಂದೆ ಸಿದ್ಧಪಡಿಸಲಾದ ಯೋಜನಾ ವರದಿಯ ಅನುಷ್ಠಾನಕ್ಕೆ ಸರ್ಕಾರ ಕ್ರಮಕೈಗೊಳ್ಳದೇ ಇರಲು ಕಾರಣವೇನು; | ಹುಣಸೂರು ನಗರದಲ್ಲಿ ಮಾಲಿನ್ಯ ನಿಯಂತ್ರಣ ಮಂಡಳಿಯು ಗುರುತಿಸಿರುವ ಸ್ಥಳಗಳಲ್ಲಿ ದಾವಣಿ ಬೀದಿ ಮತ್ತು ಶಬ್ಬೀರ್ ನಗರದ ಹತ್ತಿರ ತೆರೆದ ಚರಂಡಿಗಳಲ್ಲಿ ತ್ಯಾಜ್ಯ ನೀರು ಲಕ್ಷ್ಮಣ ತೀರ್ಥ ನದಿಗೆ ಸೇರಿ ಕಲುಷಿತವಾಗುತ್ತಿರುವುದನ್ನು ತಡೆದು ಮಾರ್ಗಾಂತರ ಮಾಡಿ 8.00 ಎಂ.ಎಲ್.ಡಿ. ಸಾಮರ್ಥ್ಯದ ಎಸ್.ಬಿ.ಆರ್. ತಾಂತ್ರಿಕತೆಯ ತ್ಯಾಜ್ಯ ನೀರು ಸಂಸ್ಕರಣಾ ಘಟಕದ ಮುಖಾಂತರ ಸಂಸ್ಕರಿಸುವ ಕಾಮಗಾರಿಗಳನ್ನು ರಾಷ್ಟ್ರೀಯ ಹಸಿರು ನ್ಯಾಯಾಧೀಕರಣದಡಿ ಕೈಗೊಳ್ಳಲು ಅಂದಾಜು ಮೊತ್ತ ರೂ.2680.00 ಲಕ್ಷಗಳಿಗೆ ಸರ್ಕಾರದ ಆದೇಶ ಸಂಖ್ಯೆ: ನಅಇ 01 ಯುಡಬ್ಲ್ಯೂಎಲ್ 2019 (ಭಾ-3), ದಿನಾಂಕ:25.03.2021 ರಲ್ಲಿ ಆಡಳಿತಾತ್ಮಕ ಅನುಮೋದನೆ ನೀಡಲಾಗಿದ್ದು, ಸದರಿ ಕಾಮಗಾರಿಗಳನ್ನು ಕೈಗೊಂಡು ತ್ಯಾಜ್ಯ ನೀರು ಸಂಸ್ಕರಣಾ ಘಟಕವನ್ನು ದಿನಾಂಕ:31.05.2024 ರಂದು ಚಾಲನೆಗೊಳಿಸಲಾಗಿದೆ. ಪ್ರಸ್ತುತ ತ್ಯಾಜ್ಯ ನೀರು ಶುದ್ಧೀಕರಣ ಘಟಕ ಕಾರ್ಯಾಚರಣೆ ಮತ್ತು ನಿರ್ವಹಣೆ ಪ್ರಗತಿಯಲ್ಲಿರುತ್ತದೆ. |

| | | |
|---|---|---|
| | | ಅಲ್ಲದೇ ನಗರದಲ್ಲಿ ಬಿಟ್ಟು ಹೋಗಿರುವ ಹಾಗೂ ಹೊಸದಾಗಿ ನಿರ್ಮಾಣಗೊಂಡಿರುವ ಪ್ರದೇಶಗಳಿಗೆ ಒಳಚರಂಡಿ ವ್ಯವಸ್ಥೆ ಇಲ್ಲದ ಕಾರಣ ನಗರದ ತ್ಯಾಜ್ಯ ನೀರು ನಗರಕ್ಕೆ ಹೊಂದಿಕೊಂಡಂತೆ ಹರಿಯುವ ಲಕ್ಷ್ಮಣ ತೀರ್ಥ ನದಿಗೆ ಸೇರುವುದನ್ನು ತಡೆಯಲು ಹಾಗೂ ನಗರದಲ್ಲಿ ಸಂಪೂರ್ಣವಾಗಿ ಒಳಚರಂಡಿ ವ್ಯವಸ್ಥೆಯನ್ನು ಕಲ್ಪಿಸಲು ಎರಡನೇ ಹಂತದ ಒಳಚರಂಡಿ ಯೋಜನೆಗೆ ರೂ. 71.00 ಕೋಟಿಗಳಿಗೆ ಅಂದಾಜು ಪಟ್ಟಿಯನ್ನು ಸಲ್ಲಿಸಲಾಗಿದ್ದು, ಹಣಕಾಸಿನ ಲಭ್ಯತೆ ಮೇರೆಗೆ ಸದರಿ 2ನೇ ಹಂತದ ಯೋಜನೆಯ ಕಾಮಗಾರಿಗಳನ್ನು ಕೈಗೊಳ್ಳಲು ಪರಿಶೀಲಿಸಲಾಗುವುದು. |
| **ಇ)** | ನದಿ ಪಾತ್ರದ ಒತ್ತುವರಿಯನ್ನು ತಡೆಗಟ್ಟುವುದು ಸೇರಿದಂತೆ, ನದಿಯ ಪುನಃಶ್ಚೇತನಕ್ಕಾಗಿ ಸರ್ಕಾರ ಕೈಗೊಳ್ಳುವ ಕ್ರಮಗಳೇನು? | ನದಿ ಪಾತ್ರದ ಒತ್ತುವರಿಯನ್ನು ತಡೆಗಟ್ಟುವುದು ಸೇರಿದಂತೆ ನದಿಯ ಪುನಃಶ್ಚೇತನವನ್ನು ಕವೇರಿ ನೀರಾವರಿ ನಿಗಮ ನಿಯಮಿತ ಹಾಗೂ ಹುಣಸೂರು ನಗರಸಭೆ ವತಿಯಿಂದ ಕೈಗೊಳ್ಳಬೇಕಾಗಿರುತ್ತದೆ.<br>ಕರ್ನಾಟಕ ನಗರ ನೀರು ಸರಬರಾಜು ಮತ್ತು ಒಳಚರಂಡಿ ಮಂಡಳಿ ವತಿಯಿಂದ ಹುಣಸೂರು ಪಟ್ಟಣದಲ್ಲಿ 2ನೇ ಹಂತದ ಒಳಚರಂಡಿ ಯೋಜನೆ ಕಾಮಗಾರಿಯನ್ನು ಕೈಗೊಳ್ಳಲು ಪ್ರಸ್ತುತ ದರಪಟ್ಟಿಯಂತೆ ರೂ.71.00 ಕೋಟಿಗಳಿಗೆ ಅಂದಾಜನ್ನು ತಯಾರಿಸಲಾಗಿದ್ದು ಸದರಿ ಯೋಜನೆಯಡಿ ಈ ಕೆಳಕಂಡ ಕಾಮಗಾರಿಗಳಿಗೆ ಅನುವು ಮಾಡಲಾಗಿರುತ್ತದೆ.<br>1. ಒಳಚರಂಡಿ ಕೊಳವೆ ಮಾರ್ಗ -59 ಕಿ.ಮೀ.<br>2. ಮೆಷಿನ್ ಹೋಲ್-2232.<br>3. ಗೃಹ ಸಂಪರ್ಕ-7850.<br>4. 02 ವೆಟ್‌ವೆಲ್ ನಿರ್ಮಾಣ.<br>5. 03-ಮಿನಿ ಎಸ್.ಟಿ.ಪಿ. (03 ಎಂ.ಎಲ್.ಡಿ).<br>6. 11 ಕೆ.ವಿ. ಎಕ್ಸ್‌ಪ್ರೆಸ್ ಫೀಡರ್ ವಿದ್ಯುತ್ ಮಾರ್ಗ-6.9 ಕಿ.ಮೀ. |

ಸಂಖ್ಯೆ : ನಅಇ 73 ಯುಎಂಎಸ್ 2025

**(ಬಿ.ಎಸ್. ಸುರೇಶ)**
ನಗರಾಭಿವೃದ್ಧಿ ಮತ್ತು
ನಗರ ಯೋಜನೆ ಸಚಿವರು